ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

865 (1112) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಪುನರ್ ವಿಂಗಡಣೆ ಮಾಡಿ ಮೇಲ್ದರ್ಜೆಗೇರಿಸುವ ನಂಜಯ್ಯನಮಠ ವರದಿಯನ್ನು ಹಿಂದಿನ ಸರ್ಕಾರ ಅಂಗೀಕರಿಸಿದ್ದರೂ ಅದು ಇನ್ನು ಪರಿಣಾಮಕಾರಿಯಾಗಿ ಜಾರಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ವರದಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಇ) ಬೆಳಗಾವಿ ಜಿಲ್ಲೆಯ ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳಾದ ಕಾಗವಾಡ, ಮಚ್ಚೆ ಪೀರನವಾಡಿ ಮತ್ತು ಅಂಕಲಿ ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಇದು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಈ) ಬೆಳಗಾವಿ ಜಿಲ್ಲೆಯಲ್ಲಿ ಬಿಟ್ಟು ಹೋಗಿರುವ ಮತ್ತು ಸರ್ಕಾರದ ನಿಯಮಾವಳಿಗಳನ್ನು ಪೂರೈಸುವಂತಹ ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಮುಂದಿನ ಗ್ರಾಮ ಪಂಚಾಯಿತಿ ಚುನಾವಣೆ ಒಳಗಾಗಿ ಮೇಲ್ದರ್ಜೆಗೇರಿಸುವ ಬಗ್ಗೆ ಸರ್ಕಾರದ ನಿಲುವೇನು; (ವಿವರ ಒದಗಿಸುವುದು)

(ಉ) ಯಾವ ಕಾಲಮಿತಿಯಲ್ಲಿ ಸದರಿ ದೊಡ್ಡ ದೊಡ್ಡ ಗ್ರಾಮ ಪಂಚಾಯಿತಿಗಳನ್ನು ಪುನರ್ ವಿಂಗಡಿಸಿ ಪಟ್ಟಣ ಪಂಚಾಯಿತಿ/ಪುರಸಭೆಗಳಾಗಿ ಮೇಲ್ದರ್ಜೆಗೇರಿಸಲಾಗುವುದು ? (ವಿವರ ಒದಗಿಸುವುದು)